184

ಮೈಸೂರ ಗಿಜಿಟ್.

ಸಂ. XXXI. ಸರ್ಕಾರದಿಂದ ಘಾಯಿಷ್ ಆದ್ದು. [ನಂ. 27.

ಬೆಂಗಳೂರು, ಗುರುವಾರ, ಜುಲೈ ತಾ/ 9, ಸ್ 1896.

IIನೇ ಭಾಗ.

ಇಂಡ್ಯಗವರ್ನಮೆಂಟ್, ರಿಸಿಡೆಂಟರು, ಚೀಫ್ ಜಡ್ಜ್‌ರು ವಗೈರೆರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫಾರೆಸ್ಟ್ ಇಲಾಖಾ.

ನೋಟಿಸ್.

ತಾರೀಖು 29ನೇ ಆಗಸ್ಟ್ 1894.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಕೆಳಿಗೆ ನಮೂದಿರುವ 12 ಕಬ್ಬಿಣದ ಆಲೆಗಳು ಬೆಂಗಳೂರು ಕೋಟೆಯಲ್ಲಿ ಹಳೇಸುಲ್ತಾನ್ ಮಹಲಿನಲ್ಲಿರುವ ಫಾರೆಸ್ಟ್ ಇಲಾಖಾ ಇನ್‌ಸ್ಪೆಕ್ಟರ್ ಜನರಲ್ ಸಾಹೇಬರವರ ಆಫಿಸಿನಲ್ಲಿ ಖರೀದಿಗೆ ದೊರಿಯುತ್ತೆ.

ನಂಬರ್.	ತಯಾರ್ ಮಾಡಿದ ಕಾರ್ಖಾನೆ ಹೆಸರು.	ಆಸಲ್ ಖರೀದಿ (ರೂಪಾಯಿ)
7	ಬೆಂಗಳೂರು ರಿಕ್ಕಿಯವರ ಕಾರ್ಖಾನೆ	ವಂದಕ್ಕೆ 150
2	ಇರ್ಗ್ಲಾಡ್ ಪೋರ್ಟ್‌ರು ಬ್ರದರ್‌ಸ್‌ರ ಡಿಟೋ	,, 170
1	ಮದ್ರಾಸ್ ಓಕ್ಸ್‌ರವರ ಡಿಟೋ	,, 250
1	ಡಿಟೋ ಡಿಟೋ ಡಿಟೋ	,, 188
1	ಡಿಟೋ ಬೋರ್ಯಾಮ್‌ರವರ ಡಿಟೋ	,, 85

ಖರೀದೀದಾರ್ರು ವ್ಯವಸಾಯ ಮಾಡುವವರಾಗಿದ್ದಲ್ಲಿ ಆಸಲ್ ಖರೀದಿಯಲ್ಲಿ ಕೇಕಡಾ $10\frac{1}{2}$ ರೂಪಾಯಿ ಸೋಡಿಯಿಂದ ವಿಕ್)ಯಿಸಲ್ಪಡುವದು.

ಯಲ್ ರಿಕ್ಕೆಟ್ಸ್, ಇನ್‌ಸ್ಪೆಕ್ಟರ್ ಜನರಲ್ ಆಫ್ ಫಾರೆಸ್ಟ್ಸ್.